Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 4-12-2022

**ಪತ್ರಿಕಾ ಪ್ರಕಟಣೆ:**

# ರಾಷ್ಟ್ರಮಟ್ಟದ ಕಬಡ್ಡಿ ಸ್ಪರ್ಧೆಗೆ ವಿ. ಡಿ. ಐ. ಟಿ. ವಿದ್ಯಾರ್ಥಿ ಆಯ್ಕೆ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದ ವಿದ್ಯಾರ್ಥಿ ಕುಮಾರ. ಸಂಬಾಜಿ ಪಿ ಪಾಟೀಲ್ ರಾಷ್ಟ್ರಮಟ್ಟದ ಅಂತರ್ ವಿಶ್ವವಿದ್ಯಾಲಯದ ಕಬ್ಬಡ್ಡಿ ಸ್ಪರ್ಧೆಗೆ ಆಯ್ಕೆಯಾಗಿದ್ದಾನೆ. ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಡಿಸೆಂಬರ್ 7ರಿಂದ 9ರವರೆಗೆ ನಡೆಯಲಿರುವ ಕಬ್ಬಡ್ಡಿ ಸ್ಪರ್ಧೆಯಲ್ಲಿ ದಕ್ಷಿಣ ಭಾರತ ವಿಶ್ವವಿದ್ಯಾಲಯದ ತಂಡಕ್ಕೆ ವಿತಾವಿ ಬೆಳಗಾವಿ ವಿಶ್ವವಿದ್ಯಾಲಯದ ವತಿಯಿಂದ ಸಂಬಾಜಿ ಪಿ ಪಾಟೀಲ್ ಪ್ರತಿನಿಧಿಸಲಿದ್ದಾನೆ. ಮಹಾವಿದ್ಯಾಲಯದ ಸಿವಿಲ್ ವಿಭಾಗದ 5ನೇ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಯು ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಪ್ರತಿನಿಧಿಸುತ್ತಿರುವುದು ತುಂಬಾ ಹೆಮ್ಮೆಯ ವಿಷಯ ಎಂದು ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಹೇಳಿದ್ದಾರೆ. ವಿದ್ಯಾರ್ಥಿಯ ಈ ಸಾಧನೆಗೆ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ, ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ. ಗದಿಗಪ್ಪ ಯಳ್ಳೂರ್, ಸಿವಿಲ್ ವಿಭಾಗದ ಮುಖ್ಯಸ್ಥರಾದ ಪ್ರೊ. ಹರ್ಷ ಜಾಧವ ಹಾಗೂ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು ವಿದ್ಯಾರ್ಥಿಗೆ ಅಭಿನಂದಿಸಿ ಶುಭ ಹಾರೈಸಿದ್ದಾರೆ.

ಪ್ರಾಂಶುಪಾಲರು

**Principal**
**KLS Vishwanathrao Deshpande Institute of Technology, Haliyal**

